# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಅಕ್ಷರ ದಾಸೋಹ ಮಧ್ಯಾಹ್ನ ಉಪಹಾರ ಯೋಜನೆ ಸಮರ್ಪಕ ಅನುಷ್ಠಾನದ ನಿಗಾ ಇಡಲು ಜಿಲ್ಲಾ ಅನುಷ್ಠಾನ ಸಮಿತಿಗಳ ನೇಮಕ ಸಂಚಾಲಕರ ನೇಮಕ-ಪರಿಷ್ಕೃತ ಆದೇಶ ಹೊರಡಿಸುವ ಬಗ್ಗೆ.

ಓದಲಾಗಿದೆ:- ಸರ್ಕಾರಿ ಆದೇಶ ಸಂಖ್ಯೆ:ಇಡಿ 81 ಎಂಎಂಎಸ್ 2003 ದಿ:19-7-2003

*****

**ಪ್ರಸ್ತಾವನೆ:-**

ರಾಜ್ಯಾದ್ಯಂತ ಜಾರಿಯಲ್ಲಿರುವ ಮಧ್ಯಾಹ್ನ ಉಪಹಾರ ಯೋಜನೆ ಅಕ್ಷರ ದಾಸೋಹ ಕಾರ್ಯಕ್ರಮದ ಸಮರ್ಪಕ ಅನುಷ್ಠಾನದ ಉಸ್ತುವಾರಿವಹಿಸಲು ಮೇಲೆ ಓದಲಾದ ದಿನಾಂಕ 19-7-2003ರ ಸರ್ಕಾರಿ ಆದೇಶದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಗಳನ್ನು ರಚಿಸಲಾಯಿತು ಹಾಗೂ ಸಂಬಂಧಪಟ್ಟ ಜಿಲ್ಲಾಧಿಕಾರಿಗಳನ್ನು ಸಮಿತಿಯ ಸಂಚಾಲಕರನ್ನಾಗಿ ನೇಮಿಸಲಾಯಿತು. ಜಿಲ್ಲಾಧಿಕಾರಿಗಳ ಉಸ್ತುವಾರಿಯಲ್ಲಿದ್ದ ಅಕ್ಷರ ದಾಸೋಹ ಕಾರ್ಯಕ್ರಮವನ್ನು 2005-06ನೇ ಸಾಲಿನಿಂದ ಜಾರಿಗೆ ಬರುವಂತೆ ಜಿಲ್ಲಾ ವಲಯಕ್ಕೆ ವರ್ಗಾಹಿಸಿದ್ದು ಸಂಬಂಧಪಟ್ಟ ಜಿಲ್ಲಾ ಪಂಚಾಯಿತ್‌ಗಳು ಇದರ ಉಸ್ತುವಾರಿಯನ್ನು ವಹಿಸುತ್ತಿವೆ. ಆದ್ದರಿಂದ ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿಯ ಸಂಚಾಲಕರನ್ನಾಗಿ ಜಿಲ್ಲಾ ಪಂಚಾಯಿತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳನ್ನು ನೇಮಿಸಲು ಉದ್ದೇಶಿಸಿ ಸರ್ಕಾರವು ಈ ಮುಂದಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ:ಇಡಿ 107 ಎಂಎಂಎಸ್ 2005, ಬೆಂಗಳೂರು, ದಿನಾಂಕ:21-10-2005**

[ಇಡಿ 54 ಸ್ಥೀವಾರ (ಯೂನಿಕ್) 2005 ದಿನಾಂಕ:21-10-2005]

ಮಧ್ಯಾಹ್ನ ಉಪಹಾರ ಯೋಜನೆ ಅಕ್ಷರ ದಾಸೋಹ ಕಾರ್ಯಕ್ರಮದ ಉಸ್ತುವಾರಿಗಾಗಿ ಇರುವ ಜಿಲ್ಲಾಮಟ್ಟದ ಸಮಿತಿಗಳಿಗೆ ಪ್ರಸ್ತುತ ಇರುವ ಜಿಲ್ಲಾಧಿಕಾರಿಗಳಿಗೆ ಬದಲಾಗಿ ತಕ್ಷಣದಿಂದ ಜಾರಿಗೆ ಬರುವಂತೆ ಸಂಬಂಧಪಟ್ಟ ಜಿಲ್ಲಾ ಪಂಚಾಯಿತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳನ್ನು ಸಂಚಾಲಕರನ್ನಾಗಿ ಈ ಮೂಲಕ ನೇಮಿಸುತ್ತದೆ. ಉಳಿದಂತೆ ದಿನಾಂಕ 19-7-2003ರ ಸರ್ಕಾರಿ ಆದೇಶದಲ್ಲಿನ ಅಂಶಗಳೇ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

(ಕೆ.ಶ್ರೀಕಂಠೇಶ್ವರ)
ವಿಶೇಷಾಧಿಕಾರಿ ಹಾಗೂ ಪದನಿಮಿತ್ತ
ಸರ್ಕಾರದ ಸಹ ಕಾರ್ಯದರ್ಶಿ(ಯೋಜನೆ)
ಶಿಕ್ಷಣ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ (ಆಡಿಟ್ 1 ಮತ್ತು 2), ಬೆಂಗಳೂರು.
2. ಎಲ್ಲಾ ಜಿಲ್ಲಾ ಉಸ್ತುವಾರಿ ಸಚಿವರು.

3. ಜಿಲ್ಲೆಯ ಎಲ್ಲಾ ವಿಧಾನಸಭಾ ಸದಸ್ಯರು.
4. ಜಿಲ್ಲೆಯ ಎಲ್ಲಾ ವಿಧಾನ ಪರಿಷತ್ ಸದಸ್ಯರು.
5. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
6. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು., ವಿಧಾನಸೌಧ, ಬೆಂಗಳೂರು.
7. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ನಿರ್ದೇಶಕರು (ಪ್ರಾಥಮಿಕ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
10. ಎಲ್ಲಾ ಜಿಲ್ಲಾ ಪಂಚಾಯತ್ ಅಧ್ಯಕ್ಷರು.
11. ಎಲ್ಲಾ ಜಿಲ್ಲಾಧಿಕಾರಿಗಳು
12. ಎಲ್ಲಾ ಜಿಲ್ಲಾ ಪಂಚಾಯಿತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು.
13. ಎಲ್ಲಾ ಜಿಲ್ಲಾ ಪಂಚಾಯಿತ್‌ನ ಮುಖ್ಯ ಲೆಕ್ಕಾಧಿಕಾರಿಗಳು/ಮುಖ್ಯ ಯೋಜನಾಧಿಕಾರಿಗಳು
14. ಎಲ್ಲಾ ಜಿಲ್ಲೆಯ ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ.
15. ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಜಿಲ್ಲಾ ಮ್ಯಾನೇಜರ್‌ಗಳು
16. ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು
17. ಜಿಲ್ಲೆಯ ಎಲ್ಲಾ ಉಪ ವಿಭಾಗೀಯ ಸಹಾಯಕರ ಆಯುಕ್ತರುಗಳು
18. ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
19. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಶಿಕ್ಷಣ ಇಲಾಖೆ, ಇವರ ಆಪ್ತ ಸಹಾಯಕರು, ಬೆಂಗಳೂರು.
20. ನಿರ್ದೇಶಕರು, ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
21. ಸರ್ಕಾರದ ಉಪ ಕಾರ್ಯದರ್ಶಿ-2, ಆರ್ಥಿಕ ಇಲಾಖೆ, ಬೆಂಗಳೂರು.
22. ಆಂತರಿಕ ಆರ್ಥಿಕ ಸಲಹೆಗಾರರು, ಶಿಕ್ಷಣ ಇಲಾಖೆ, ಬೆಂಗಳೂರು.
23. ಶಾಖಾ ರಕ್ಷಾ ಕಡತ